



ಅರುಣ ಪಿ. ಭಟ್ಟ

# ವಾರಭವಿಷ್ಯ: 25.2.2021ರಿಂದ 3.3.2021ರವರೆಗೆ

**ಮೇಷ**

ಸಾಹಿತ್ಯ ಕ್ಷೇತ್ರದಲ್ಲಿ ಇರುವವರಿಗೆ ಉತ್ತಮವಾದ ಪ್ರಗತಿ ಇದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕವಾದ ಪ್ರಗತಿ ಇದೆ. ಆದಾಯ ಮೂಲದಿಂದ ಅನುಕೂಲ ಪಡೆಯಲಿದ್ದೀರಿ. ವೈಯಕ್ತಿಕ ಸಂಬಂಧಗಳು ಸುಮಧುರವಾಗಿ ಇರುತ್ತವೆ. ಇದರಿಂದ ನಿಮ್ಮ ಸಂತೋಷ ಹೆಚ್ಚಾಗಲಿದೆ. ವಾರದ ಮಧ್ಯ ಭಾಗದಲ್ಲಿ ನೀವು ತೆಗೆದುಕೊಂಡ ನಕಾರಾತ್ಮಕ ನಿರ್ಧಾರಗಳ ಬಗ್ಗೆ ಚಿಂತಿಸುತ್ತೀರಿ. ಶುಭದಿನ 29. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.

**ವೃಷಭ**

ಕೌಟುಂಬಿಕ ವಿಚಾರಗಳಲ್ಲಿ ಪ್ರಗತಿಯನ್ನು ಕಾಣಲಿದ್ದೀರಿ. ಮಾರಾಟ ವಿಭಾಗದಲ್ಲಿ ಕೆಲಸ ನಿರ್ವಹಿಸುವವರು ಗುರಿ ಮುಟ್ಟುತ್ತೀರಿ. ಆರೋಗ್ಯ ಉತ್ತಮವಾಗಿ ಇರುತ್ತದೆ. ಬಂಡವಾಳ ಹೂಡಿಕೆಗೆ ಹಲವು ಅವಕಾಶಗಳನ್ನು ಪರಿಶೀಲಿಸಿ, ಯಶಸ್ಸು ಪಡೆಯುತ್ತೀರಿ. ಮದುವೆ ಸಂಬಂಧಗಳನ್ನು ಹುಡುಕುತ್ತಿದ್ದಲ್ಲಿ ಅದರಲ್ಲಿ ಯಶಸ್ಸು ಕಾಣುವ ಅವಕಾಶ ಹೆಚ್ಚಾಗಿದೆ. ಶುಭದಿನ 1. ಶ್ರೀ ಲಕ್ಷ್ಮೀ ನರಸಿಂಹಪಂಚರತ್ನ ಸ್ತೋತ್ರ ಪಠಿಸಿರಿ.

**ಮಿಥುನ**

ನೀವು ನಂಬಿದ ವಿಚಾರಗಳನ್ನು ಪ್ರಸ್ತುತ ಪಡಿಸುವುದಕ್ಕೆ ಬಹಳ ಶ್ರಮ ಪಡುತ್ತೀರಿ. ಸ್ನೇಹಿತರಿಗೆ ಸಾಲ ನೀಡಿದರೆ ವಾಪಸ್ ಬರುವುದು ಕಷ್ಟ. ಕಾನೂನು ವಿಚಾರಗಳು ನಿಮ್ಮ ವಿರುದ್ಧ ಸಾಗುತ್ತವೆ. ಬೇರೊಬ್ಬರು ನೀಡಿದ ವಸ್ತು, ಹಣ ಕಳೆದುಕೊಳ್ಳುವ ಸಾಧ್ಯತೆಯಿದೆ. ವಾಹನ ಚಾಲನೆ ಮಾಡುವಾಗ ಎಚ್ಚರ. ಹತ್ತಿರದ ಸ್ಥಳವೊಂದಕ್ಕೆ ಪ್ರವಾಸ ಕೈಗೊಳ್ಳಲಿದ್ದೀರಿ. ಶುಭದಿನ 27. ಗಣೇಶಪಂಚರತ್ನ ಸ್ತೋತ್ರ ಪಠಣ ಮಾಡಿರಿ.

**ಕಟಕ**

ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆದರೂ ಆಗಬಹುದು.ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಸಂಗಾತಿ ಮಕ್ಕಳಿಗೆ ಬೆಲೆ ಬಾಳುವ ಉಡುಗೊರೆ ನೀಡುವ ಬಗ್ಗೆ ಆಲೋಚನೆ ಮಾಡುತ್ತೀರಿ. ಶುಭದಿನ 1. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.

**ಸಿಂಹ**

ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ಜತೆಗೆ ಕೆಲಸ ಕಾರ್ಯಗಳಲ್ಲಿ ಆಗುತ್ತಿರುವ ಪ್ರಗತಿ ಬಗ್ಗೆ ತೃಪ್ತಿ ಮೂಡುತ್ತದೆ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ಆರೋಗ್ಯ ಉತ್ತಮವಾಗಿರುತ್ತದೆ. ಮನೆಯಲ್ಲಿ ಹಾಗೂ ಕುಟುಂಬದಲ್ಲಿ ಸಂತಸ ಇರುತ್ತದೆ. ಶುಭದಿನ 3. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.

**ಕನ್ಯಾ**

ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಸೋದರ– ಸಹೋದರಿಯರು ಸಹಾಯಕ್ಕೆ ನಿಲ್ಲುತ್ತಾರೆ. ಮನೆಯಲ್ಲಿ ಸಂತಸದ ವಾತಾವರಣ ಇರುತ್ತದೆ. ಈ ವಾರ ನೀವು ಕೆಲವು ಧಾರ್ಮಿಕ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಸಾಧ್ಯತೆ ಇದೆ. ಶುಭದಿನ 2. ಆದಿತ್ಯ ಹೃದಯ ಪಠಿಸಿರಿ.

**ತುಲಾ**

ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಕುಟುಂಬದ ಸದಸ್ಯರಿಗೆ ಕೆಲಸಗಳನ್ನು ವಹಿಸುತ್ತೀರಿ. ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಕಾನೂನಿಗೆ ಸಂಬಂಧಿಸಿದ ವಿಚಾರಗಳಲ್ಲಿ ತೊಡಗಿಕೊಳ್ಳಬೇಕಾದ ಅಗತ್ಯ ಕಂಡುಬರುತ್ತದೆ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸಲಿದ್ದೀರಿ. ಶುಭದಿನ 2. ಚಂಡಿ ಪಾರಾಯಣ ಮಾಡಿರಿ.

**ವೃಶ್ಚಿಕ**

ವಾರದ ಮೊದಲ ಭಾಗದಲ್ಲಿ ಅತಿ ಮುಖ್ಯವಾದ ಕೆಲಸ ಮುಗಿಸಿಕೊಳ್ಳಿ. ಉದ್ಯೋಗಸ್ಥರು ಗುಣಮಟ್ಟದ ನಿರ್ಧಾರ ಹಾಗೂ ಆಲೋಚನೆಗಳಿಂದ ಮೆಚ್ಚುಗೆಗೆ ಪಾತ್ರರಾಗುತ್ತೀರಿ. ನಿಮ್ಮ ಸಾಮರ್ಥ್ಯ ಕಂಡು ಇತರರು ಬೆರಗಾಗುತ್ತಾರೆ.ಸಾರ್ವಜನಿಕ ಮನ್ನಣೆ ದೊರೆಯುವ ಅವಕಾಶಗಳು ನಿಚ್ಚಳವಾಗಿವೆ. ಅತಿ ಮುಖ್ಯವಾದ ಹುದ್ದೆಗೆ ನಿಮ್ಮ ಹೆಸರನ್ನು ಸೂಚಿಸುವ ಸಾಧ್ಯತೆ ಇದೆ. ಶುಭದಿನ 1. ಲಕ್ಷ್ಮೀ ನರಸಿಂಹ ಸ್ತೋತ್ರ ಪಠಿಸಿರಿ.

**ಧನಸ್ಸು**

ಗ್ರಹಗತಿಗಳು ನಿಮ್ಮ ಕಡೆಗೆ ಶುಭ ದೃಷ್ಟಿ ಬೀರುತ್ತಿವೆ. ಬಾಕಿ ಇರುವ ನಿಮ್ಮ ಹಲವು ಕೆಲಸಗಳಿಗೆ ಈ ವಾರ ಪರಿಹಾರ ಸಿಗಲಿದೆ. ಉದ್ಯೋಗ ಹಾಗೂ ವೈಯಕ್ತಿಕ ಸಂಗತಿಗಳಲ್ಲಿ ನಿಮ್ಮ ಪಾಲಿಗೆ ಯಶಸ್ಸು ದೊರೆಯಲಿದೆ. ಈ ಅವಧಿಯಲ್ಲಿ ಹೆಚ್ಚು ಸಮಾಧಾನ ಹಾಗೂ ಸಂತೋಷದಿಂದ ಕಾಣಿಸಿಕೊಳ್ಳುತ್ತೀರಿ. ಸಂಬಂಧಿಕರ ಜತೆಗೆ ಸೌಹಾರ್ದ ಬಾಂಧವ್ಯ ಇರುತ್ತದೆ. ಶುಭದಿನ 25. ಸುಬ್ರಹ್ಮಣ್ಯ ಸ್ವಾಮಿಗೆ ಕ್ಷೀರಾಭಿಷೇಕ ಮಾಡಿರಿ.

**ಮಕರ**

ವಾರದ ಆರಂಭದಲ್ಲಿ ವೃತ್ತಿಪರರಿಗೆ ಮುಖ್ಯವಾದ ಅವಕಾಶ ದೊರೆಯುತ್ತವೆ. ಉನ್ನತ ವಿದ್ಯಾಭ್ಯಾಸಕ್ಕಾಗಿ ಸ್ಥಳಾಂತರ ಆಗುವ ಸಾಧ್ಯತೆಗಳಿವೆ. ಅಲರ್ಜಿ ಸಮಸ್ಯೆ ಇರುವವರು ಎಚ್ಚರಿಕೆಯಿಂದ ಇರಬೇಕು. ಸಂಗಾತಿ ಜತೆಗೆ ಸಂತಸದಿಂದ ಇರಲಿದ್ದೀರಿ. ವೃತ್ತಿ– ಸಾಮಾಜಿಕ ಚಟುವಟಿಕೆಗಳ ಮಧ್ಯೆ ಗೊಂದಲ ಏರ್ಪಡಲಿದೆ. ಸಣ್ಣ ಪುಟ್ಟ ವಿಷಯಗಳ ಬಗ್ಗೆ ನಿರ್ಲಕ್ಷ್ಯ ಬೇಡ. ಶುಭದಿನ 2. ರಾಘವೇಂದ್ರ ಸ್ವಾಮಿಗಳ ಆರಾಧನೆ ಮಾಡಿರಿ.

**ಕುಂಭ**

ಕಲೆ, ಸಾಹಿತ್ಯ, ವೈದ್ಯಕೀಯ, ಸೌಂದರ್ಯ, ಫ್ಯಾಷನ್, ಸಂಗೀತ ಕ್ಷೇತ್ರದಲ್ಲಿ ಇರುವವರಿಗೆ ಅನುಕೂಲಕರವಾಗಲಿದೆ. ಹಿರಿಯ ಅಧಿಕಾರಿಗಳ ಸಹಾಯದಿಂದ ನಿಮ್ಮ ಕೌಶಲವನ್ನು ಹೆಚ್ಚು ಮಾಡಿಕೊಳ್ಳುತ್ತೀರಿ. ವಾರದ ಆರಂಭದಲ್ಲಿ ಮಕ್ಕಳಿಂದ ನಿಮಗೆ ಶುಭ ಸುದ್ದಿ ಇದೆ. ಅವರಿಂದ ನೀವು ಹೆಮ್ಮೆ ಪಡುತ್ತೀರಿ. ವಿವಿಧ ಮೂಲಗಳಿಂದ ಸಂಪತ್ತು ಸಂಗ್ರಹ ಆಗುತ್ತದೆ. ಶುಭದಿನ 1. ಗೋಪೂಜೆ ಮಾಡಿ. ಶಿವಕವಚ ಪಠಿಸಿರಿ.

**ಮೀನ**

ಇಂಟರವ್ಯೂಗಳಲ್ಲಿ ಭಾಗವಹಿಸುವವರು ಅನುಕೂಲಕರ ಫಲಿತಾಂಶ ನಿರೀಕ್ಷಿಸಬಹುದು. ಸಿನಿಮಾ, ವೈದ್ಯಕೀಯ ವೃತ್ತಿಯವರಿಗೆ ಅತ್ಯುತ್ತಮವಾದ ಲಾಭ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಬಡ್ತಿಗೆ ಅತ್ಯುತ್ತಮ ಅವಕಾಶಗಳಿವೆ. ವಾರದ ಮಧ್ಯ ಭಾಗದಲ್ಲಿ ಪ್ರಗತಿ ಮತ್ತಷ್ಟು ವೇಗ ಪಡೆದುಕೊಳ್ಳುತ್ತದೆ. ಶುಭದಿನ 27. ದೇವ್ಯಪರಾಧ ಕ್ಷಮಾಪನಾ ಸ್ತೋತ್ರ ಪಠಿಸಿರಿ.